ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

9

ಲಾಖೆ / ವಿಷಯ : DEPARTMENT / SUBJECT:

ತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 17/1/2021

## ಅಕ್ರಮದ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿ

# ನಾಳೆಯಿಂದ ಗೋ ಕಾಯಿದೆ

**ವಿಕ ಸುದ್ದಿಲೋಕ** ಬೆಂಗಳೂರು

ರಾಜ್ಯದಲ್ಲಿ 18 ರಿಂದ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಸಂರಕ್ಷಣಾ ಸುಗ್ರೀವಾಜ್ಞೆ ಜಾರಿಯಾಗಲಿದೆ. ಗೋವುಗಳ ಹತ್ಯೆ ಹಾಗೂ ಅಕ್ರಮ ಸಾಗಾಟ ಸಂಪೂರ್ಣ ನಿಷೇಧವಾಗುತ್ತದೆ ಎಂದು ಪಶುಸಂಗೋಪನೆ, ಹಜ್ ಮತ್ತು ವಕ್ಫ್ ಸಚಿವ ಪ್ರಭು ಚವ್ಹಾಣ್ ತಿಳಿಸಿದ್ದಾರೆ.



''ಕಾಯಿದೆಗೆ ನಿಯಮಗಳನ್ನು ರೂಪಿಸುವ ಕಾರ್ಯ ಬಹುತೇಕ ಪೂರ್ಣಗೊಂಡಿದ್ದು ಶೀಘ್ರವೇ ಬಿಡುಗಡೆ ಮಾಡಲಾಗುವುದು. ಜಾನುವಾರು ಸಾಗಾಣಿಕೆಗೆ ಸಂಬಂಧಿಸಿದಂತೆ ಕೂಡಲೇ ನಿಯಮಗಳನ್ನು ರೂಪಿಸಿ ಜಾರಿಗೊಳಿಸಲಾಗುವುದು. ರಾಜ್ಯದಲ್ಲಿ ರೈತರು ಕೃಷಿ ಉದ್ದೇಶಕ್ಕಾಗಿ ಜಾನುವಾರು ಸಾಗಣೆ ಮಾಡುವವರು ಯಾವುದೇ ಕಾರಣಕ್ಕೂ ಗೊಂದಲಕ್ಕೀಡಾಗಬಾರದು,'' ಎಂದು ಸಚಿವರು ರೈತರಲ್ಲಿ ಮನವಿ ಮಾಡಿದ್ದಾರೆ.

''ಪೊಲೀಸ್ ಇಲಾಖೆಯು ಗೋವುಗಳ ಸಂರಕ್ಷಣೆಯಲ್ಲಿ ತೊಡಗಿರುವ ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಪ್ರಾಣಿ ಕಲ್ಯಾಣ ಮಂಡಳಿಯ ಜತೆ ಕೈಜೋಡಿಸಲು ಹಾಗೂ ಎಲ್ಲ ಹಂತಗಳಲ್ಲಿ ಕಾಯಿದೆ ಜಾರಿಗೆ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ. ಅಲ್ಲದೇ ಗೋಹತ್ಯೆ, ಅಕ್ರಮ ಸಾಗಾಟದ ಮೇಲೆ ಪೊಲೀಸ್ ಇಲಾಖೆ ಹಾಗೂ ಪಶುಸಂಗೋಪನಾ ಇಲಾಖೆಗೆ ಹೆಚ್ಚು ನಿಗಾವಹಿಸಬೇಕು,'' ಎಂದು ಸಚಿವರು ತಿಳಿಸಿದ್ದಾರೆ.

''ಅಕ್ರಮ ಗೋವುಗಳ ಸಾಗಾಟ ಮತ್ತು ವಧೆ ಬಗ್ಗೆ ಹತ್ತಿರದ ಠಾಣೆ ಅಥವಾ ಆ ಜಿಲ್ಲೆ ಅಥವಾ ತಾಲೂಕಿನ ವ್ಯಾಪ್ತಿಯ ಪಶುಪಾಲನಾ ಇಲಾಖೆ ಗಮನಕ್ಕೆ ತರಬೇಕು. ಉದ್ವೇಗದಲ್ಲಿ ಕಾನೂನು ಕೈಗೆತ್ತಿಕೊಳ್ಳಬಾರದು,'' ಎಂದು ಸಚಿವರು ಎಚ್ಚರಿಕೆ ನೀಡಿದ್ದಾರೆ.

### ಗೋ ಮಾಂಸ ರಫ್ತುದಾರರ ಮೊದ್ಲು ಜೈಲಿಗೆ ಕಳಿಸಿ

**ಕೊಪ್ಪಳ:** ಗೋಮಾಂಸ ತಿನ್ನುವವರನ್ನು ಜೈಲಿಗೆ ಹಾಕುತ್ತೇವೆ ಎನ್ನುವವರು ಮೊದಲು, ದನದ ಮಾಂಸ ರಫ್ತು ಮಾಡುವವರನ್ನು ಜೈಲಿಗೆ ಕಳಿಸುವ ಧೈರ್ಯ ತೋರಲಿ ಎಂದು ಶಾಸಕ ಕೆ. ರಾಘವೇಂದ್ರ ಹಿಟ್ನಾಳ್ ಸವಾಲು ಹಾಕಿದರು. ಸುದ್ದಿಗಾರರೊಂದಿಗೆ ಮಾತನಾಡಿ, ''ದೇಶದಲ್ಲಿ ಅತಿ ಹೆಚ್ಚು ದನದ ಮಾಂಸ ರಫ್ತು ಮಾಡುವ ರಾಜ್ಯ ಯಾವುದು ಅಂತ ಎಲ್ಲರಿಗೂ ಗೊತ್ತು'' ಎಂದರು.